ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ/04/ಇಎಸ್‌ಟಿ/2(ಬಿ)/2019-20

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ,
ಬೆಂಗಳೂರು-560 001,
ದಿನಾಂಕ: 04.03.2020.

## ಸುತ್ತೋಲೆ

**ವಿಷಯ:** 2019-20ನೇ ಸಾಲಿಗೆ ಸರ್ಕಾರಿ ಪಾಲಿಟೆಕ್ನಿಕ್‌ಗಳ ಉಪನ್ಯಾಸಕರಿಗೆ ವಿವಿಧ ಇಲಾಖೆಗಳಲ್ಲಿ ಅರ್ಜಿ ಆಹ್ವಾನಿಸಲಾಗಿರುವ ಹುದ್ದೆಗಳಗೆ ಅರ್ಜಿ ಸಲ್ಲಿಸಲು ನಿರಾಕ್ಷೇಪಣಾ ಪ್ರಮಾಣ ಪತ್ರ ನೀಡುವ ಬಗ್ಗೆ.

**ಉಲ್ಲೇಖ:** ನಿರ್ದೇಶನಾಲಯದ ಸುತ್ತೋಲೆ ಸಂಖ್ಯೆ: ಡಿಟಿಇ/34/ಇಎಸ್‌ಟಿ (2) ಬಿ/2018-19, ದಿನಾಂಕ: 10.04.2019.

ಉಲ್ಲೇಖಿತ ನಿರ್ದೇಶನಾಲಯದ ಸುತ್ತೋಲೆಯಲ್ಲಿ, ರಾಜ್ಯದ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ ಸರ್ಕಾರಿ ಪಾಲಿಟೆಕ್ನಿಕ್‌ಗಳು ಹಾಗೂ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ / ಬೋಧಕೇತರ ಸಿಬ್ಬಂದಿಗಳು ಕೇಂದ್ರ/ರಾಜ್ಯ ಸರ್ಕಾರಗಳ ವಿವಿಧ ಇಲಾಖೆಗಳಲ್ಲಿ ಆಹ್ವಾನಿಸಲಾಗುವ ಹುದ್ದೆಗಳಗೆ ಅರ್ಜಿ ಸಲ್ಲಿಸಲು ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಕೋರಿ ಮನವಿಯನ್ನು ಪ್ರಾಚಾರ್ಯರಿಗೆ ಸಲ್ಲಿಸಿದಾಗ, ಸದರಿ ಮನವಿಯನ್ನು ನಿರ್ದೇಶನಾಲಯಕ್ಕೆ ಸಲ್ಲಿಸುವ ಬಗ್ಗೆ ಪಾಲಿಸಬೇಕಾದ ಮಾರ್ಗಸೂಚಿಗಳನ್ನು ಸುತ್ತೋಲೆಯಲ್ಲಿ ತಿಳಿಸಲಾಗಿರುತ್ತದೆ.

ಆದರೂ ಕೆಲವು ಸಂಸ್ಥೆಗಳಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಕೋರಿ ನಿರ್ದೇಶನಾಲಯಕ್ಕೆ ಸಲ್ಲಿಸುವ ಪ್ರಸ್ತಾವನೆಗಳಲ್ಲಿ ಉಲ್ಲೇಖಿತ ನಿರ್ದೇಶನಾಲಯದ ಸುತ್ತೋಲೆಯಲ್ಲಿನ ತಿಳಿಸಲಾದ ಮಾರ್ಗಸೂಚಿಗಳನ್ನು ಸರಿಯಾಗಿ ಪಾಲಿಸದೇ ಅಪೂರ್ಣ ಮಾಹಿತಿಯುಳ್ಳ ಪ್ರಸ್ತಾವನೆಗಳನ್ನು ಸಲ್ಲಿಸಲಾಗುತ್ತಿದ್ದು ಇದರಿಂದ ನಿಗದಿತ ಸಮಯದೊಳಗಾಗಿ ನಿರಾಕ್ಷೇಪಣ ಪ್ರಮಾಣ ಪತ್ರವನ್ನು ನೀಡಲು ತೊಡಕುಂಟಾಗಿರುತ್ತದೆ. ಆದ್ದರಿಂದ ಮುಂದಿನ ದಿನಗಳಲ್ಲಿ ಉಲ್ಲೇಖಿತ ನಿರ್ದೇಶನಾಲಯದ ಸುತ್ತೋಲೆಯಲ್ಲಿ ತಿಳಿಸಲಾಗಿರುವಂತೆ ಪೂರ್ಣ ಮಾಹಿತಿಯೊಂದಿಗೆ ಪ್ರಸ್ತಾವನೆಗಳನ್ನು ಸಲ್ಲಿಸಲು ಮತ್ತೊಮ್ಮೆ ತಿಳಿಸಲಾಗಿದೆ. **ಇಲ್ಲವಾದಲ್ಲಿ ಯಾವುದೇ ಕಾರಣ ನೀಡದೇ ಅಪೂರ್ಣ ಮಾಹಿತಿಯುಳ್ಳ ನಿರಾಕ್ಷೇಪಣಾ ಪ್ರಮಾಣ ಪತ್ರಗಳನ್ನು ಕೋರಿ ಸಲ್ಲಿಸಲಾದ ಪ್ರಸ್ತಾವನೆಗಳನ್ನು ತಿರಸ್ಕರಿಸಲಾಗುವುದೆಂದು ತಿಳಿಸಲಾಗಿದೆ.** ನಿರ್ದೇಶನಾಲಯಕ್ಕೆ ಹಿಂಬರಹದ ಮೂಲಕ ಪ್ರಸ್ತಾವನೆಯನ್ನು ಸಲ್ಲಿಸಿದಲ್ಲಿ ಸಂಬಂಧಪಟ್ಟ ಪ್ರಾಚಾರ್ಯರ ವಿರುದ್ಧ ಸೂಕ್ತ ಶಿಸ್ತುಕ್ರಮ ಕೈಗೊಳ್ಳಲಾಗುವುದು.

ನಿರ್ದೇಶಕರು

**ಇವರಿಗೆ:**

1) ಪ್ರಾಚಾರ್ಯರು, ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್‌ಗಳು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು- ಮಾಹಿತಿಗಾಗಿ ಉಲ್ಲೇಖಿತ ಸುತ್ತೋಲೆಯ ಪ್ರತಿಯನ್ನು ಲಗತ್ತಿಸಿದೆ.
2) ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.

ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ/34/ಇಎಸ್‌ಟಿ 2(ಬಿ)/2018–19 /60

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ,
ಬೆಂಗಳೂರು – 560 001
ದಿನಾಂಕ: 10.04.2019.

**ಸುತ್ತೋಲೆ**

ರಾಜ್ಯದ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ ಸರ್ಕಾರಿ ಪಾಲಿಟೆಕ್ನಿಕ್‌ಗಳು ಹಾಗೂ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ / ಭೋಧಕೇತರ ಸಿಬ್ಬಂದಿಗಳು ಕೇಂದ್ರ/ರಾಜ್ಯ ಸರ್ಕಾರಗಳ ವಿವಿಧ ಇಲಾಖೆಗಳಲ್ಲಿ ಆಹ್ವಾನಿಸಲಾಗುವ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಕೋರಿ ಸಂಬಂಧಪಟ್ಟ ಸಂಸ್ಥೆಯ ಪ್ರಾಚಾರ್ಯರಿಗೆ ಮುಂದಿನ ಕ್ರಮಕ್ಕಾಗಿ ಮನವಿ ಸಲ್ಲಿಸಿದಾಗ, ಅದನ್ನು ಪ್ರಾಚಾರ್ಯರು ಪರಿಶೀಲಿಸಿ ಸದರಿ ಸಿಬ್ಬಂದಿಗಳ ವಿರುದ್ಧ ಯಾವುದೇ ಇಲಾಖಾ ಹಂತದಲ್ಲಿ ವಿಚಾರಣೆ ಇಲ್ಲವೆಂಬ ಬಗ್ಗೆ ಖಚಿತಪಡಿಸಿಕೊಂಡು ಈ ಕೆಳಗಿನ ನಮೂನೆಯಲ್ಲಿನ ಅಂಶಗಳನ್ನು ನಮೂದಿಸಿ, ಅರ್ಜಿ ಆಹ್ವಾನಿಸಲಾದ ಹುದ್ದೆಗಳಿಗೆ ಸಂಬಂಧಿಸಿದ ಅಧಿಸೂಚನೆಯ ನಕಲು ಪ್ರತಿಯೊಂದಿಗೆ ನಿರ್ದೇಶನಾಲಯಕ್ಕೆ ಪ್ರಸ್ತಾವನೆ ಸಲ್ಲಿಸಲು ತಿಳಿಸಲಾಗಿದೆ.

| ಕ್ರ. ಸಂ | ಸಿಬ್ಬಂದಿಯ ಹೆಸರು ಮತ್ತು ಪದನಾಮ | ವಿಭಾಗ | ಸೇವೆಗೆ ಸೇರಿದ ದಿನಾಂಕ | ಅರ್ಜಿ ಸಲ್ಲಿಸುತ್ತಿರುವ ಹುದ್ದೆ / ಪರೀಕ್ಷೆ | ಇಲಾಖೆ / ಪರೀಕ್ಷಾ ಪ್ರಾಧಿಕಾರ | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | ಇಲಾಖೆಯ ಶಿಸ್ತು ಪ್ರಕರಣ ಬಾಕಿ ಇದೆಯೇ. ಹೌದು / ಇಲ್ಲ | ಷರಾ |
|---|---|---|---|---|---|---|---|---|
| (1) | (2) | (3) | (4) | (5) | (6) | (7) | (8) | (9) |
| 1. | | | | | | | | |
| 2. | | | | | | | | |

**ಸೂಚನೆ:**

ಸಿಬ್ಬಂದಿಗಳ ಅರ್ಜಿಯನ್ನು ಪರಿಶೀಲಿಸಿ, ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಕ್ಕಿಂತ 15 ದಿನಗಳ **ಮುಂಚಿತವಾಗಿ ಪ್ರಾಚಾರ್ಯರ ಸೂಕ್ತ ಶಿಫಾರಸ್ಸಿನೊಂದಿಗೆ ನಿರ್ದೇಶನಾಲಯಕ್ಕೆ ಪ್ರಸ್ತಾವನೆ ಸಲ್ಲಿಸಲು** ತಿಳಿಸಿದೆ.

ಆಡಳಿತಾಧಿಕಾರಿ
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು

ಇವರಿಗೆ:

1) ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ / ಪಾಲಿಟೆಕ್ನಿಕ್ / ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರಿಗೆ;
2) ಇ–ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು;
3) ಕಛೇರಿ ಪ್ರತಿ.